# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ:04ನೇ ಜುಲೈ, 2018
(ಸಮಯ: ಬೆಳಗ್ಗೆ 10.30 ಗಂಟೆಗೆ)

* * *

### 01. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಎನ್.ಹೆಚ್-169ರ ಗುರುಪುರ ಸೇತುವೆ ದುರಸ್ಥಿ ಬಗ್ಗೆ **ಮಾನ್ಯ ಲೋಕೋಪಯೋಗಿ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಎಂ.ಕೆ. ಪ್ರಾಣೇಶ್** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ವಿವಿಧ ಹುದ್ದೆಗಳನ್ನು ಸೃಜಿಸುವುದರ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ** ಸಚಿವರ ಗಮನ ಸೆಳೆಯುವುದು.

### 02. ನಿಯಮ 330ರ ಮೇರೆಗೆ

**ಶ್ರೀ ಮರಿತಿಬ್ಬೇಗೌಡ** ಅವರು ಪದವಿ ಪೂರ್ವ ಶಿಕ್ಷಣ ಇಲಾಖೆಯು 2018-2019ನೇ ಸಾಲಿನ ಶೈಕ್ಷಣಿಕ ವೇಳಾ ಪಟ್ಟಿಯ ಸುತ್ತೋಲೆ ಹೊರಡಿಸಿ. ತರಗತಿಗಳನ್ನು ಪ್ರಾರಂಭಿಸಿರುವುದರಿಂದ ಉಂಟಾದ ತೊಂದರೆ ವಿಷಯವನ್ನು ಪ್ರಸ್ತಾಪಿಸುವುದು. (**ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**)

....2

## 03.ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2018ನೇ ಜುಲೈ, 02ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:03-07-2018ರಂದು **ಶ್ರೀ ಐವನ್ ಡಿ' ಸೋಜಾರ**ವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

(ಎರಡನೆಯ ದಿನ)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ.**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**